**All India Radio: Bangalore**
**Regional Bulletin In Kannada**
**09.02.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ನಾಳೆ ಏರೋ ಇಂಡಿಯಾ ೨೦೨೫ಕ್ಕೆ ಚಾಲನೆ - ರಕ್ಷಣಾ ಉತ್ಪಾದನೆಯಲ್ಲಿ ಭಾರತ ಸ್ವಾವಲಂಬನೆಯತ್ತ ಸಾಗಲು ಸಹಕಾರಿ- ರಕ್ಷಣಾ ಸಚಿವ ರಾಜ್‌ನಾಥ್ ಸಿಂಗ್
2. ಬೆಂಗಳೂರಿನಲ್ಲಿ ಸೇನಾಪಡೆ, ವಾಯುಪಡೆ ಮುಖ್ಯಸ್ಥರಿಂದ ತೇಜಸ್ ಲಘು ಯುದ್ಧವಿಮಾನದಲ್ಲಿ ಹಾರಾಟ
3. ಪರಿಶಿಷ್ಟ ಪಂಗಡಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಕೇಂದ್ರ ಸರ್ಕಾರ ಬದ್ಧ - ಸಚಿವ ಪ್ರಹ್ಲಾದ್ ಜೋಷಿ
4. ನಾಳೆ ವಿದ್ಯಾರ್ಥಿಗಳೊಂದಿಗೆ ಪ್ರಧಾನಿ ನರೇಂದ್ರ ಮೋದಿ ಪರೀಕ್ಷಾ ಪೇ ಚರ್ಚಾ ಸಂವಾದ
5. ಕಲ್ಯಾಣ ಕರ್ನಾಟಕ ಭಾಗದಲ್ಲಿ ೨೦೦ ಕರ್ನಾಟಕ ಪಬ್ಲಿಕ್ ಶಾಲೆ ಸ್ಥಾಪನೆಗೆ ಸರ್ಕಾರ ಚಿಂತನೆ

<><><><>

ಏಷ್ಯಾದ ಅತಿದೊಡ್ಡ ಏರ್ ಶೋ - ಏರೋ ಇಂಡಿಯಾ ೨೦೨೫ರ ೧೫ನೇ ಆವೃತ್ತಿಯು ಬೆಂಗಳೂರಿನ ಯಲಹಂಕದಲ್ಲಿ ನಾಳೆಯಿಂದ ಆರಂಭವಾಗಲಿದೆ. ರಕ್ಷಣಾ ಸಚಿವ ರಾಜ್‌ನಾಥ್ ಸಿಂಗ್, ನಾಳೆ ವೈಮಾನಿಕ ಪ್ರದರ್ಶನಕ್ಕೆ ಚಾಲನೆ ನೀಡಲಿದ್ದಾರೆ. ಏರ್ ಶೋ ಹಿನ್ನೆಲೆಯಲ್ಲಿ ಈಗಾಗಲೇ ಲೋಹದ ಹಕ್ಕಿಗಳಾದ ಸೂರ್ಯ ಕಿರಣ್, ಸುಖೋಯ್ ಯುದ್ಧ ವಿಮಾನಗಳು ಈಗಾಗಲೇ ತಾಲೀಮು ನಡೆಸಿವೆ. ಕಾರ್ಯಕ್ರಮದ ಮೊದಲ ಮೂರು ದಿನಗಳು ವಾಣಿಜ್ಯ ವ್ಯವಹಾರದ ದಿನಗಳಾಗಿದ್ದು, ೧೩ ಮತ್ತು ೧೪ ರಂದು ಪ್ರದರ್ಶನವನ್ನು ಸಾರ್ವಜನಿಕರು ವೀಕ್ಷಿಸಲು ಅನುವು ಮಾಡಿಕೊಡಲಾಗಿದೆ. ಶತ್ರುಗಳ ವಿರುದ್ಧ ರಹಸ್ಯ ಕಾರ್ಯಾಚರಣೆ ನಡೆಸಬಲ್ಲ ೫ನೇ ತಲೆಮಾರಿನ ಅತ್ಯಾಧುನಿಕ ಯುದ್ಧ ವಿಮಾನಗಳಾದ ರಷ್ಯಾ ದೇಶದ 'ಎಸ್‌ಯು-೫೭' 'ಅಮೆರಿಕದ ಎಫ್-೩೫' ಬೆಂಗಳೂರಿನ ಆಕಾಶದಲ್ಲಿ ತನ್ನ ಸಾಮರ್ಥ್ಯವನ್ನು ಪ್ರದರ್ಶಿಸಲಿದೆ. ಈ ಬಾರಿಯ ಏರ್ ಶೋನಲ್ಲಿ ಭಾಗವಹಿಸುವ ಪ್ರಮುಖ ದೇಶಗಳಲ್ಲಿ ಅಮೆರಿಕ ಅತ್ಯುತ್ಸಾಹದಿಂದ ಪಾಲ್ಗೊಂಡಿದ್ದು, ಮಾನವ ರಹಿತ ವೈಮಾನಿಕ ವ್ಯವಸ್ಥೆಗಳು, ಯುದ್ಧವಿಮಾನಗಳು, ಸುಧಾರಿತ ವೈಮಾನಿಕ ಹಾರಾಟ ಹಾಗೂ ರಕ್ಷಣಾ ತಂತ್ರಜ್ಞಾನದ ಪ್ರದರ್ಶನಕ್ಕೆ ಸಜ್ಜಾಗಿದೆ.

ಈ ನಡುವೆ ಬೆಂಗಳೂರಿನಲ್ಲಿ ಏರ್ ಶೋ ಹಿನ್ನೆಲೆಯಲ್ಲಿ ವ್ಯಾಪಕ ಬಿಗಿ ಭದ್ರತೆ ಕೈಗೊಳ್ಳಲಾಗಿದೆ.

<><><><>

ದೇಶೀಯ ರಕ್ಷಣಾ ಉತ್ಪಾದನೆ ದಾಖಲೆಯ ೧. ೨೭ ಲಕ್ಷ ಕೋಟಿ ರೂಪಾಯಿ ಮೀರಿದೆ ಎಂದು ರಕ್ಷಣಾ ಸಚಿವ ರಾಜ್‌ನಾಥ್ ಸಿಂಗ್ ತಿಳಿಸಿದ್ದಾರೆ. ಏರೋ ಇಂಡಿಯಾ ೨೦೨೫ ರ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಈ ವೈಮಾನಿಕ ಪ್ರದರ್ಶನದ ಫಲಶೃತಿಯಿಂದಾಗಿ ರಕ್ಷಣಾ ಉತ್ಪಾದನೆಯಲ್ಲಿ ಭಾರತ ಸ್ವಾವಲಂಬನೆಯತ್ತ ಸಾಗಲು ಸಹಕಾರಿಯಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ____ಧ್ವನಿ______ ರಾಜ್‌ನಾಥ್ ಸಿಂಗ್ ಈ ಬಾರಿಯ ಏರ್‌ಶೋನಲ್ಲಿ ವಿವಿಧ ರಾಷ್ಟ್ರಗಳ ಸಚಿವರ ನಿಯೋಗಗಳು ವಾಯುಪಡೆಯ ಹಿರಿಯ ಅಧಿಕಾರಿಗಳು ಉದ್ಯಮದ ಮುಖಂಡರು ವೇದಿಕೆ ಹಂಚಿಕೊಳ್ಳಲಿದ್ದು, ಜಗತ್ತಿನಾದ್ಯಂತ ಉನ್ನತ ರಕ್ಷಣಾ ಮತ್ತು ವೈಮಾನಿಕ ಕ್ಷೇತ್ರದ ಪಾಲುದಾರರನ್ನು ಒಂದುಗೂಡಿಸಲಿದೆ ಎಂದು ರಾಜ್‌ನಾಥ್ ಸಿಂಗ್ ತಿಳಿಸಿದ್ದಾರೆ. ಏರೋ ಇಂಡಿಯಾ ೨೦೨೫, ಭಾರತವು ವೈಮಾನಿಕ ಕ್ಷೇತ್ರ ಹಾಗೂ ರಕ್ಷಣಾ ವಲಯದ ಜಾಗತಿಕ ನಾಯಕನಾಗುವ ಹಾದಿಯಲ್ಲಿ ಒಂದು ಐತಿಹಾಸಿಕ ಮೈಲುಗಲ್ಲು ಸ್ಥಾಪಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

____ಧ್ವನಿ______ ರಾಜ್‌ನಾಥ್ ಸಿಂಗ್

ಜಾಗತಿಕ ನಿಯೋಜನೆ ಮೂಲಕ ಅಭಿವೃದ್ಧಿ ಸಾಕಾರ - ಎಡ್ಜ್ ಎಂಬುದು ಈ ಬಾರಿಯ ದುಂಡು ಮೇಜಿನ ಸಭೆಯ ವಿಷಯವಾಗಿದೆ. ಸುಮಾರು ೧೦೦ ಕ್ಕೂ ಹೆಚ್ಚು ವೈಮಾನಿಕ ಹಾಗೂ ರಕ್ಷಣಾ ಕ್ಷೇತ್ರದ ಉದ್ಯಮಿಗಳು ಈ ದುಂಡು ಮೇಜಿನ ಸಭೆಯಲ್ಲಿ ಭಾಗವಹಿಸಲಿದ್ದಾರೆ.

<><><><>

ಏರೋ ಇಂಡಿಯಾ ೨೦೨೫ಕ್ಕೆ ಚಾಲನೆ ದೊರೆಯುವ ಮುನಾ ದಿನವಾದ ಇಂದು ಭಾರತೀಯ ವಾಯುಪಡೆ ಮುಖ್ಯಸ್ಥ ಏರ್ ಚೀಫ್ ಮಾರ್ಷಲ್ ಎ.ಪಿ.ಸಿಂಗ್ ಹಾಗೂ ಸೇನಾ ಮುಖ್ಯಸ್ಥರಾದ ಜನರಲ್ ಉಪೇಂದ್ರ ದ್ವಿವೇದಿ ಇಂದು ತೇಜಸ್ ಯುದ್ಧ ವಿಮಾನದಲ್ಲಿ ಹಾರಾಟ ನಡೆಸಿದರು. ಏರ್ ಚೀಫ್ ಮಾರ್ಷಲ್ ಎ.ಪಿ.ಸಿಂಗ್ ಪೈಲೆಟ್ ಆಗಿ ಕಾರ್ಯನಿರ್ವಹಿಸಿದ್ದು, ವಿಶೇಷವಾಗಿತ್ತು. ಉಪೇಂದ್ರ ದ್ವಿವೇದಿ ಅವರು, ಸಹ ಪೈಲೆಟ್ ಆಗಿ ಕಾರ್ಯನಿರ್ವಹಿಸದ್ದರು. ಭಾರತೀಯ ವಾಯುಪಡೆ ಸ್ಥಳೀಯವಾಗಿ ನಿರ್ಮಿಸಲಾದ ಲಘು ಯುದ್ಧ ವಿಮಾನ ತೇಜಸ್‌ನಲ್ಲಿ ಸುಮಾರು ೪೫ ನಿಮಿಷಗಳ ಕಾಲ ಹಾರಾಟ ನಡೆಸಿದರು. ಇದೇ ಮೊದಲ ಬಾರಿಗೆ ಸಶಸ್ತ್ರ ಪಡೆಗಳ ಇಬ್ಬರು ಮುಖ್ಯಸ್ಥರು ಸ್ಥಳೀಯ ವಿಮಾನದಲ್ಲಿ ಒಟ್ಟಿಗೆ ಹಾರಾಟ ನಡೆಸಿದ್ದಾರೆ.

<><><><>

ಪ್ರಧಾನಮಂತ್ರಿ ಜನ್ ಜಾತಿಯ ಯೋಜನೆಯಡಿ ಪರಿಶಿಷ್ಟ ಜಾತಿಯ ಜನರು ವಾಸಿಸುವ ಸ್ಥಳಗಳಲ್ಲಿ ಮನೆ, ಶಿಕ್ಷಣ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕೇಂದ್ರ ಸರ್ಕಾರ ಒದಗಿಸುತ್ತಿದೆ

ಎಂದು ಕೇಂದ್ರ ಆಹಾರ ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಷಿ ತಿಳಿಸಿದ್ದಾರೆ. ಹರಿಹರ ತಾಲೂಕಿನ ವಾಲ್ಮೀಕಿ ಗುರುಪೀಠದಲ್ಲಿಂದು ನಡೆದ ವಾಲ್ಮೀಕಿ ಜಯಂತೋತ್ಸವದಲ್ಲಿ ಮಾತನಾಡಿದ ಅವರು, ಪರಿಶಿಷ್ಟ ಜನರ ಕಲ್ಯಾಣಕ್ಕಾಗಿ ಈ ಹಿಂದೆ ಇದ್ದ ೨ ಸಾವಿರದ ೪ ಕೋಟಿ ರೂಪಾಯಿಗಳ ಅನುದಾನವನ್ನು ೧೫ ಸಾವಿರ ಕೋಟಿ ರೂಪಾಯಿಗೆ ಹೆಚ್ಚಿಸಲಾಗಿದೆ ಹೇಳಿದ್ದಾರೆ.

______ಧ್ವನಿ______ಪ್ರಹ್ಲಾದ್ ಜೋಷಿ

<><><>

ಪರೀಕ್ಷೆಗಳನ್ನು ಎದುರಿಸುವ ಕುರಿತಂತೆ ಪ್ರಧಾನಮಂತ್ರಿ ನರೇಂದ್ರ ಮೋದಿ ಪ್ರತಿವರ್ಷವೂ, ವಿದ್ಯಾರ್ಥಿಗಳೊಂದಿಗೆ ನಡೆಸುವ ಸಂವಾದ ಕಾರ್ಯಕ್ರಮ ಪರೀಕ್ಷಾ ಪೇ ಚರ್ಚಾ ನಾಳೆ ಬೆಳಗ್ಗೆ ೧೧ ಗಂಟೆಗೆ ನಡಯಲಿದೆ. ವಿದ್ಯಾರ್ಥಿಗಳು, ಪೋಷಕರು ಹಾಗೂ ಶಿಕ್ಷಕರು ಸಂವಾದದಲ್ಲಿ ಪಾಲ್ಗೊಳ್ಳಲಿದ್ದು, ಈ ವೇಳೆ ಪ್ರಧಾನಮಂತ್ರಿ ನರೇಂದ್ರ ಮೋದಿ, ಪರೀಕ್ಷಾ ಸಿದ್ಧತೆ, ಒತ್ತಡ ನಿರ್ವಹಣೆ ಮತ್ತು ವೈಯಕ್ತಿಕ ಬೆಳವಣಿಗೆ ಕುರಿತಂತೆ ಚರ್ಚೆ ನಡೆಸಲಿದ್ದಾರೆ. ಈ ವರ್ಷ ಪ್ರತಿ ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶದಿಂದ ೩೬ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗಿದ್ದು, ಇವರಲ್ಲಿ ಕಲಾ ಉತ್ಸವ ಮತ್ತು ವೀರ ಗಾಥಾ ಕಾರ್ಯಕ್ರಮದ ವಿಜೇತರೂ ಸೇರಿದ್ದಾರೆ. ಈ ಬಾರಿಯ ಪರೀಕ್ಷಾ ಪೇ ಚರ್ಚಾ ಹೊಸ ವಿನ್ಯಾಸದೊಂದಿಗೆ ೮ ಸಂಚಿಕೆಗಳಲ್ಲಿ ಮೂಡಿ ಬರುತ್ತಿದೆ. ಪ್ರಧಾನಮಂತ್ರಿಯವರ ಸಂವಾದ ಕಾರ್ಯಕ್ರಮವನ್ನು ದೂರದರ್ಶನ, ಸ್ವಯಂಪ್ರಭ, ಪ್ರಧಾನಮಂತ್ರಿ ಕಾರ್ಯಾಲಯದ ಅಧಿಕೃತ ಯುಟ್ಯೂಬ್ ಚಾನೆಲ್, ಶಿಕ್ಷಣ ಸಚಿವಾಲಯ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಸಾಮಾಜಿಕ ಜಾಲತಾಣಗಳಲ್ಲಿ ನೇರ ಪ್ರಸಾರ ಮಾಡಲಾಗುವುದು. ೨೦೧೮ರಲ್ಲಿ ಆರಂಭವಾದಾಗಿನಿಂದ ಪರೀಕ್ಷಾ ಪೇ ಚರ್ಚಾ ಒಂದು ರಾಷ್ಟ್ರವ್ಯಾಪಿ ಆಂದೋಲನವಾಗಿ ರೂಪುಗೊಂಡಿದೆ. ಈ ವರ್ಷದ ಆವೃತ್ತಿ ೫ ಕೋಟಿಗೂ ಹೆಚ್ಚಿನ ಭಾಗವಹಿಸುವಿಕೆ ಮೂಲಕ ಹಿಂದಿನ ಆವೃತ್ತಿಗಳ ದಾಖಲೆಯನ್ನು ಮುರಿದಿದೆ.

<><><>

ಜೆಡಿಎಸ್ ಹಾಗೂ ಎನ್‌ಡಿಎ ಮೈತ್ರಿ ನಡುವೆ ಯಾವುದೇ ಸಮಸ್ಯೆಯಿಲ್ಲ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರ ಸ್ವಾಮಿ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಬಿಜೆಪಿಯಲ್ಲಿನ ಬಣ ರಾಜಕೀಯ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಅದು ಬಿಜೆಪಿ ಪಕ್ಷದ ಆಂತರಿಕ ವಿಚಾರವಾಗಿದೆ. ಪಕ್ಷದ ಹಿರಿಯ ನಾಯಕರು ಈ ಬಗ್ಗೆ ಗಮನ ಹರಿಸಿದ್ದು, ಇದರಿಂದಾಗಿ ಮೈತ್ರಿಗೆ ಯಾವುದೇ ಸಮಸ್ಯೆ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ರಾಜಧಾನಿ ಬೆಂಗಳೂರಿನಲ್ಲಿ ಇದೇ ೧೧ ರಂದು ಜಾಗತಿಕ ಹೂಡಿಕೆದಾರರ ಸಮಾವೇಶವನ್ನು ರಕ್ಷಣಾ ಸಚಿವ ರಾಜ್‌ನಾಥ್ ಸಿಂಗ್ ಉದ್ಘಾಟಿಸಲಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಸಮಾವೇಶದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಹಾಗೂ ಲೋಕಸಭೆ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಪಾಲ್ಗೊಳ್ಳಲಿದ್ದಾರೆ. ೧೯ ದೇಶಗಳು ಈ ಜಿಮ್ ಸಮಾವೇಶದಲ್ಲಿ ಪಾಲ್ಗೊಳ್ಳುತ್ತಿದ್ದು, ಈ ಪೈಕಿ ೧೦ ರಾಷ್ಟ್ರಗಳೊಂದಿಗೆ ಸುಸ್ಥಿರ ಆರ್ಥಿಕ ಬೆಳವಣಿಗೆ, ಹೂಡಿಕೆಗೆ ಅವಕಾಶಗಳು ಜಾಗತಿಕ ಪೂರೈಕೆ ಸರಪಳಿಯಲ್ಲಿ ಕರ್ನಾಟಕದ ಸ್ಥಾನ ಮಾನ ರಾಜ್ಯದಲ್ಲಿ ಮರುಬಳಕೆ ಇಂಧನ ಕ್ಷೇತ್ರದ ಭವಿಷ್ಯ, ಆರೋಗ್ಯ ಸೇವೆ, ಮೊದಲಾದ ನಿರ್ಣಾಯಕ ಕ್ಷೇತ್ರಗಳ ಬಗ್ಗೆ ಚರ್ಚೆ ನಡೆಯಲಿದೆ.

<><><>

ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಗ್ರಾಮೀಣ ಭಾಗದ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ನೀಡುವ ನಿಟ್ಟಿನಲ್ಲಿ ೨೦೦ ಕಡೆ ಕೆ.ಪಿ.ಎಸ್. ಮಾದರಿಯ ಕರ್ನಾಟಕ ಪಬ್ಲಿಕ್ ಶಾಲೆ ಸ್ಥಾಪನೆಗೆ ಚಿಂತನೆ ನಡೆದಿದೆ ಎಂದು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ.ಅಜಯ್ ಸಿಂಗ್ ತಿಳಿಸಿದ್ದಾರೆ.

<><><>

ದಕ್ಷಿಣದ ಪ್ರಯಾಗ್ ರಾಜ್ ಎಂದು ಪ್ರಸಿದ್ಧಿ ಪಡೆದಿರುವ ತಿ.ನರಸೀಪುರದ ತಿರುಮ ಕೂಡಲು ತ್ರಿವೇಣಿ ಸಂಗಮದಲ್ಲಿ ಆರು ವರ್ಷಗಳ ಬಳಿಕ ನಾಳೆ ಕುಂಭಮೇಳ ನಡೆಯಲಿದೆ. ನಾಳೆಯಿಂದ ಮೂರು ದಿನಗಳ ಕಾಲ ನಡೆಯುವ ಪುಣ್ಯ ಸ್ನಾನಕ್ಕೆ ಲಕ್ಷಾಂತರ ಮಂದಿ ಆಗಮಿಸುವ ನಿರೀಕ್ಷೆ ಇದೆ. ಕಾವೇರಿ, ಕಪಿಲ, ಸ್ಪಟಿಕ ನದಿಗಳ ಪವಿತ್ರ ಸಂಗಮ ಸ್ಥಳವಾದ ತಿರುಮ ಕೂಡಲಿನಲ್ಲಿ ಮೈಸೂರು ಜಿಲ್ಲಾಡಳಿತ ಸಕಲ ಸಿದ್ಧತೆ ನಡೆಸಿದೆ.

<><><>

ಸಂಕ್ಷಿಪ್ತ ಸುದ್ದಿ

1. ರಾಮನಗರ ಜಿಲ್ಲಾ ಪೊಲೀಸ್ ಹಾಗೂ ಕನಕಪುರ ರೂರಲ್ ಎಜುಕೇಶನಲ್ ಸೊಸೈಟಿ ಸಂಯುಕ್ತ ಆಶ್ರಯದಲ್ಲಿ ಮಾದಕ ವ್ಯಸನದ ವಿರುದ್ಧ ಇಂದು ಜಾಗೃತಿ ಕಾರ್ಯಕ್ರಮ ನಡೆಯಿತು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>